ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ತೋಟಗಾರಿಕೆ ಇಲಾಖೆಯ ಸಿಬ್ಬಂದಿಗಳ ಮುಂಬಡ್ತಿ ನೀಡುವ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

659 (831) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ದಿನಾಂಕ:03-09-2020ರಂದು ನಡೆದ ಇಲಾಖೆಯ ಮುಂಬಡ್ತಿ ಸಭೆಯಲ್ಲಿ 54 ಅಧಿಕಾರಿಗಳಿಗೆ ಶಿಫಾರಸ್ಸು ಮಾಡಿ ಅದರಲ್ಲಿ 22 ಅಧಿಕಾರಿಗಳಿಗೆ ಮಾತ್ರ ಮುಂಬಡ್ತಿ ನೀಡಲಾಗಿದ್ದು, ಉಳಿದ ಅಧಿಕಾರಿಗಳ ಮುಂಬಡ್ತಿ ನೀಡದಿರಲು ಕಾರಣವೇನು; (ವಿವರ ನೀಡುವುದು)

(ಆ) ಪ್ರಸ್ತುತ ಇಲಾಖೆಯಲ್ಲಿ ಖಾಲಿ ಉಳಿದಿರುವ ಸಹಾಯಕ ತೋಟಗಾರಿಕೆ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ನೀಡಲು ನಿಗದಿಪಡಿಸಿದ ಹುದ್ದೆಗಳ ವಿವರ ನೀಡುವುದು;

(ಇ) ತೋಟಗಾರಿಕೆ ಸಹಾಯಕರ ಹುದ್ದೆಗಳನ್ನು ರೈತ ಸಂಪರ್ಕ ಕೇಂದ್ರಗಳ ಅಡಿಯಲ್ಲಿ ನಿಯೋಜಿಸದೇ ತಾಲ್ಲೂಕು ಕಛೇರಿ ಅಧೀನದಲ್ಲಿ ನಿಯೋಜಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ರೈತ ಸಂಪರ್ಕ ಕೇಂದ್ರದಲ್ಲಿರುವ ಸಹಾಯಕ ತೋಟಗಾರಿಕೆ ಅಧಿಕಾರಿಗಳಿಗೆ ಹೋಬಳಿ ವ್ಯಾಪ್ತಿಯಲ್ಲಿ ಕರ್ತವ್ಯನಿರ್ವಹಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನದಲ್ಲಿದಿಯೇ;

(ಈ) ಎಸ್. ಎಸ್. ಎಲ್. ಸಿ/ಪಿ. ಯು. ಸಿ ಮತ್ತು 10 ತಿಂಗಳ ತೋಟಗಾರಿಕೆ ಡಿಪ್ಲೋಮೊ/ತರಬೇತಿ ಪಡೆದ ನೇಮಕಗೊಂಡಿರುವ ತೋಟಗಾರಿಕೆ ಸಹಾಯಕರಿಗೆ ನೇರವಾಗಿ ಸಹಾಯಕರು ತೋಟಗಾರಿಕೆ ಅಧಿಕಾರಿ (ಬಿ-ವೃಂದ) ಹುದ್ದೆಗೆ ಮುಂಬಡ್ತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಯಾವ ಆಧಾರದ ಮೇಲೆ ತಾಂತ್ರಿಕ ಹುದ್ದೆಗೆ ಬಡ್ತಿ ನೀಡಲಾಗುತ್ತಿದೆ;ಇದರಿಂದ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿರುವ ಬಿ. ಎಸ್. ಸಿ/ಎಂ. ಎಸ್ಸಿ ಪಡೆದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುವುದಿಲ್ಲವೇ?